KA / BG - GPO/ 2515 /WPP-47/ 2009 - 2011

# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ಪತ್ರಿಕೆ



| ಭಾಗ – IV-A | ಬೆಂಗಳೂರು, ಸೋಮವಾರ, ಅಕ್ಟೋಬರ್ ೩೧, ೨೦೧೧ (ಕಾರ್ತೀಕ ೯, ಶಕ ವರ್ಷ ೧೯೩೩) | ನಂ. ೯೦೩ |
|---|---|---|



## ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಸಚಿವಾಲಯ

### ಅಧಿಸೂಚನೆ

**ಸಂಖ್ಯೆ: ಸಿಆಸುಇ 26 ಸೇವನೆ 2011, ಬೆಂಗಳೂರು, ದಿನಾಂಕ: 29.10.2011**

ಕರ್ನಾಟಕ ಸಿವಿಲ್ ಸೇವಾ (ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ನೇರ ನೇಮಕಾತಿ ಮತ್ತು ಆಯ್ಕೆ) (ಸಾಮಾನ್ಯ) ನಿಯಮಗಳು, 2006 ಇದನ್ನು ಮತ್ತಷ್ಟು ತಿದ್ದುಪಡಿ ಮಾಡುವುದಕ್ಕೆ ದಿನಾಂಕ: 21.09.2011ರ ಅಧಿಸೂಚನೆ ಸಂಖ್ಯೆ: ಸಿಆಸುಇ 26 ಸೇವನೆ 2011 ರಲ್ಲಿ ಪ್ರಕಟಿಸಿರುವ ಈ ಮುಂದಿನ ನಿಯಮಗಳ ಕರಡನ್ನು ಅಧಿಕೃತ ರಾಜ್ಯಪತ್ರದಲ್ಲಿ ಇದರ ಪ್ರಕಟಣೆಯ ದಿನಾಂಕದಿಂದ 15 ದಿನಗಳೊಳಗಾಗಿ ಅದರಿಂದ ಬಾಧಿತರಾಗುವ ಸಂಭವವಿರುವ ಎಲ್ಲ ವ್ಯಕ್ತಿಗಳಿಂದ ಆಕ್ಷೇಪಣೆಗಳನ್ನು ಮತ್ತು ಸಲಹೆಗಳನ್ನು ಆಹ್ವಾನಿಸಿ ದಿನಾಂಕ: 21.09.2011ರ ಕರ್ನಾಟಕ ರಾಜ್ಯಪತ್ರದ ಭಾಗ–IV ಎ (ಸಂ: 845) ರಲ್ಲಿ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ ಅಧಿನಿಯಮ, 1978 (1990ರ ಕರ್ನಾಟಕ ಅಧಿನಿಯಮ 14)ರ 3ನೇ ಪ್ರಕರಣದ (2) ನೇ ಉಪ ಪ್ರಕರಣದ (ಎ) ಖಂಡದ ಮೂಲಕ ಅಗತ್ಯಪಡಿಸಲಾದಂತೆ ಪ್ರಕಟಿಸಲಾಗಿರುವುದರಿಂದ;

ಸದರಿ ರಾಜ್ಯಪತ್ರವನ್ನು ದಿನಾಂಕ: 21.09.2011 ರಂದು ಸಾರ್ವಜನಿಕರಿಗೆ ಲಭ್ಯವಾಗುವಂತೆ ಮಾಡಿರುವುದರಿಂದ;

ಮತ್ತು, ಸದರಿ ಕರಡಿನ ಬಗ್ಗೆ ಯಾವುದೇ ಆಕ್ಷೇಪಣೆ/ಸಲಹೆಗಳು ಸ್ವೀಕೃತವಾಗದಿರುವುದರಿಂದ;

ಈಗ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ ಅಧಿನಿಯಮ, 1978 (1990ರ ಕರ್ನಾಟಕ ಅಧಿನಿಯಮ, 14)ರ 8ನೇ ಪ್ರಕರಣದೊಂದಿಗೆ ಓದಿಕೊಂಡ 3ನೇ ಪ್ರಕರಣದ (1)ನೇ ಉಪ ಪ್ರಕರಣದ ಮೂಲಕ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಈ ಮೂಲಕ ಈ ಕೆಳಕಂಡ ನಿಯಮಗಳನ್ನು ರಚಿಸುತ್ತದೆ, ಅಂದರೆ:–

### ನಿಯಮಗಳು

1. **ಶಿರೋನಾಮೆ ಮತ್ತು ಪ್ರಾರಂಭ.**– (1) ಈ ನಿಯಮಗಳನ್ನು ಕರ್ನಾಟಕ ಸಿವಿಲ್ ಸೇವಾ (ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ನೇರ ನೇಮಕಾತಿ ಮತ್ತು ಆಯ್ಕೆ) (ಸಾಮಾನ್ಯ) (ಐದನೇ ತಿದ್ದುಪಡಿ) ನಿಯಮಗಳು, 2011 ಎಂದು ಕರೆಯತಕ್ಕದ್ದು.

(2) ಇವು, ಅಧಿಕೃತ ರಾಜ್ಯಪತ್ರದಲ್ಲಿ ಪ್ರಕಟವಾದ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

Scanned by CamScanner

**2. ನಿಯಮ 8ಕ್ಕೆ ತಿದ್ದುಪಡಿ:–** ಕರ್ನಾಟಕ ಸಿವಿಲ್ ಸೇವಾ (ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ನೇರ ನೇಮಕಾತಿ ಮತ್ತು ಆಯ್ಕೆ) (ಸಾಮಾನ್ಯ) ನಿಯಮಗಳು, 2006 (ಇನ್ನು ಮುಂದೆ ಸದರಿ ನಿಯಮಗಳೆಂದು ಉಲ್ಲೇಖಿಸಲಾಗುವುದು)ರ ನಿಯಮ 8ರ ಉಪ ನಿಯಮ (3)ರ ನಂತರ ಈ ಕೆಳಕಂಡವುಗಳನ್ನು ಸೇರಿಸತಕ್ಕದ್ದು; ಅಂದರೆ

"(4) ಆಯೋಗವು ಉಪನಿಯಮ (1) ಅಥವಾ (2), ಇವುಗಳಲ್ಲಿ ಯಾವುದು ಅನ್ವಯವಾಗುವುದೋ ಅದರ ಪ್ರಕಾರ ಉಪನಿಯಮ (1) ಅಥವಾ (2)ರಡಿಯಲ್ಲಿ ತಯಾರಿಸಿದ ಪಟ್ಟಿಯಲ್ಲಿ ಒಳಗೊಂಡಿರದ ಅಭ್ಯರ್ಥಿಗಳ ಒಂದು ಹೆಚ್ಚುವರಿ ಆಯ್ಕೆ ಪಟ್ಟಿಯನ್ನು ಪ್ರಕಟಿತ ರಿಕ್ತ ಸ್ಥಾನಗಳಿಗೆ ಅನುಗುಣವಾಗಿ ತಾಂತ್ರಿಕ ಹುದ್ದೆಗಳಿಗೆ ಸಂಬಂಧಿಸಿದಂತೆ ಸಾಧ್ಯವಾದಷ್ಟು ಮಟ್ಟಿಗೆ ಶೇ. 50ರಷ್ಟು ಮೀರದಂತೆ ಹಾಗೂ ತಾಂತ್ರಿಕೇತರ ಹುದ್ದೆಗಳಿಗೆ ಸಂಬಂಧಿಸಿದಂತೆ ಶೇ. 10ರಷ್ಟು ಮೀರದಂತೆ ಜಾರಿಯಲ್ಲಿರುವ ನೇರ ನೇಮಕಾತಿ ಮೀಸಲಾತಿ ನೀತಿ (ನೇರ ಮತ್ತು ಸಮತಳ ಮೀಸಲಾತಿ) ಯನ್ನು ಪರಿಗಣಿಸಿ ಅಭ್ಯರ್ಥಿಗಳ ಒಂದು ಹೆಚ್ಚುವರಿ ಆಯ್ಕೆ ಪಟ್ಟಿಯನ್ನು ತಯಾರಿಸತಕ್ಕದ್ದು ಮತ್ತು ಈ ಪಟ್ಟಿಯು ಪ್ರಕಟಿತ ದಿನಾಂಕದಿಂದ ಒಂದು ವರ್ಷದ ಅವಧಿಯವರೆಗೆ ಜಾರಿಯಲ್ಲಿರುತ್ತದೆ."

**3. ನಿಯಮ 9ಕ್ಕೆ ತಿದ್ದುಪಡಿ:–** ಸದರಿ ನಿಯಮಗಳ ನಿಯಮ 9ರ ಉಪನಿಯಮ (3)ರ ಬದಲಾಗಿ ಈ ಕೆಳಕಂಡದ್ದನ್ನು ಪ್ರತಿಸ್ಥಾಪಿಸತಕ್ಕದ್ದು ಅಂದರೆ:–

"(3) ನಿಯಮ 8ರ ಉಪನಿಯಮ (4)ರಡಿಯಲ್ಲಿ ತಯಾರಿಸಲಾದ ಹೆಚ್ಚುವರಿ ಪಟ್ಟಿಯಲ್ಲಿ ಯಾವ ಅಭ್ಯರ್ಥಿಗಳ ಹೆಸರುಗಳನ್ನು ಸೇರಿಸಲಾಗಿದೆಯೋ, ಆ ಅಭ್ಯರ್ಥಿಗಳನ್ನು ನಿಯಮ 8ರ ಉಪನಿಯಮ (1) ಅಥವಾ (2)ರಡಿ ತಯಾರಿಸಲಾದ ಪಟ್ಟಿಯಲ್ಲಿ ಒಳಗೊಂಡಿರುವ ಅಭ್ಯರ್ಥಿಗಳು ನೇಮಕಾತಿ ಪ್ರಾಧಿಕಾರ ನೇಮಕಾತಿ ಆದೇಶವನ್ನು ಹೊರಡಿಸಿದ ನಂತರ ಕರ್ತವ್ಯದ ಮೇಲೆ ಹಾಜರಾಗಲು ನಿಗದಿಪಡಿಸಿದ ಅವಧಿಯೊಳಗೆ ಕರ್ತವ್ಯಕ್ಕೆ ಹಾಜರಾಗದೇ ಇದ್ದಲ್ಲಿ ಆ ರಿಕ್ತ ಸ್ಥಾನಗಳಿಗೆ ಮಾತ್ರ ಅದೇ ರೀತಿ ನೇಮಕಾತಿ ಮಾಡತಕ್ಕದ್ದು".

**4. ನಿಯಮ 10ಕ್ಕೆ ತಿದ್ದುಪಡಿ:–** ಸದರಿ ನಿಯಮಗಳ ನಿಯಮ 10ರ ಉಪನಿಯಮ (3)ರ ನಂತರ ಈ ಕೆಳಕಂಡದ್ದನ್ನು ಸೇರಿಸತಕ್ಕದ್ದು ಅಂದರೆ:–

"(4) ನೇಮಕಾತಿ ಪ್ರಾಧಿಕಾರವು ಈ ನಿಯಮಗಳ ಉಪಬಂಧಗಳನ್ವಯ ತಯಾರಿಸಿದ ಮುಖ್ಯ ಪಟ್ಟಿಯಲ್ಲಿ ಒಳಗೊಂಡಿರದ ಅಭ್ಯರ್ಥಿಗಳ ಒಂದು ಹೆಚ್ಚುವರಿ ಆಯ್ಕೆ ಪಟ್ಟಿಯನ್ನು ಪ್ರಕಟಿತ ರಿಕ್ತ ಸ್ಥಾನಗಳಿಗೆ ಅನುಗುಣವಾಗಿ ಸಾಧ್ಯವಾದಷ್ಟು ಮಟ್ಟಿಗೆ ಶೇ. 10ರಷ್ಟು ಮೀರದಂತೆ ಜಾರಿಯಲ್ಲಿರುವ ನೇರ ನೇಮಕಾತಿ ಮೀಸಲಾತಿ ನೀತಿ (ನೇರ ಮತ್ತು ಸಮತಳ ಮೀಸಲಾತಿ) ಯನ್ನು ಪರಿಗಣಿಸಿ ತಯಾರಿಸತಕ್ಕದ್ದು.

(5) ಉಪನಿಯಮ (4)ರಡಿಯಲ್ಲಿ ತಯಾರಿಸಲಾದ ಹೆಚ್ಚುವರಿ ಪಟ್ಟಿಯಲ್ಲಿ ಯಾವ ಅಭ್ಯರ್ಥಿಗಳ ಹೆಸರುಗಳನ್ನು ಸೇರಿಸಲಾಗಿದೆಯೋ, ಆ ಅಭ್ಯರ್ಥಿಗಳನ್ನು ಮುಖ್ಯ ಪಟ್ಟಿಯಲ್ಲಿ ಒಳಗೊಂಡಿರುವ ಅಭ್ಯರ್ಥಿಗಳು ನೇಮಕಾತಿ ಪ್ರಾಧಿಕಾರ ನೇಮಕಾತಿ ಆದೇಶವನ್ನು ಹೊರಡಿಸಿದ ನಂತರ ಕರ್ತವ್ಯದ ಮೇಲೆ ಹಾಜರಾಗಲು ನಿಗದಿಪಡಿಸಿದ ಅವಧಿಯೊಳಗೆ ಕರ್ತವ್ಯಕ್ಕೆ ಹಾಜರಾಗದೇ ಇದ್ದಲ್ಲಿ, ಆ ರಿಕ್ತ ಸ್ಥಾನಗಳಿಗೆ ಮಾತ್ರ ಅದೇ ರೀತಿ ನೇಮಕಾತಿ ಮಾಡತಕ್ಕದ್ದು".

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

**ದೇವರಾಜು**
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು–1)

Scanned by CamScanner